OS 217/2019
PW-1
07-09-2021.

ಸಾಕ್ಷಿಯನ್ನು ದಿನಾಂಕಃ07-09-2021 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆ: ವಾದಿ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿರುವ ಸಂಗತಿಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದು ಮತ್ತು ಅದರಲ್ಲಿ ಬರೆದ ಸಂಗತಿಗಳು ಸತ್ಯವಾಗಿವೆ.

ದಿಃ10-03-1987 ರ ಕ್ರಯಪತ್ರದ ಅಸಲು ಪ್ರತಿಯನ್ನು ಹಾಜರುಪಡಿಸಿರುತ್ತೇನೆ, ಸದರಿ ದಾಖಲೆಯನ್ನು ನಿಪಿ-1 ಎಂದು, ಡಿಸಿಬಿ ರಿಜಿಸ್ಟರ್ ನ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ., ಸದರಿ ದಾಖಲೆಯನ್ನು ನಿಪಿ-2 ಎಂದು, ಎಂಆರ್ ನಂ 13/2013-14 ರ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ., ಸದರಿ ದಾಖಲೆಯನ್ನು ನಿಪಿ-3 ಎಂದು, 2019-20 ನೇ ಸಾಲಿನ ಡಿಸಿಬಿ ರಿಜಿಸ್ಟರ್ ಎಕ್ಸ್ ಟ್ರಾಕ್ಟ್ ನ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ., ಸದರಿ ದಾಖಲೆಯನ್ನು ನಿಪಿ-4 ಎಂದು, ದಿಃ01-10-2019 ಮತ್ತು 20-09-2019 ರ ವಕೀಲರ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ., ಸದರಿ ದಾಖಲೆಯನ್ನು ನಿಪಿ-5 ಮತ್ತು 6 ಎಂದು ಗುರುತಿಸಲಾಯಿತು.

(ವಕೀಲರು ಮುಂದುವರಿದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದರಿಂದ ಮುಂದುವರಿದ ಮುಖ್ಯ ವಿಚಾರಣೆಗೆ ಸಮಯ ನೀಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಪಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ
ಚನ್ನಗಿರಿ